# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್रಿಕೆ


**ಸುಭಾಷಿತ:**

ತಿನ್ನುವ ಅನ್ನದ ಮೇಲೆ ಅಹಂಕಾರ ಪಟ್ಟರೆ,
ರೋಗ ರುಜಿನದಿಂದ ಬಳಲುತ್ತಾನೆ..
ಹೆಣ್ಣನ್ನು ತಿರಸ್ಕಾರ ಭಾವದಿಂದ ನೋಡಿದರೆ
ಭ್ರಷ್ಟಚಾರಿಯಾಗಿಯೇ ಉಳಿಯುತ್ತಾನೆ..
ಒದಗಿ ಬಂದ ಸಂಪತ್ತನ್ನು ಕಡೆಗಣಿಸಿದರೆ
ದರಿದ್ರನಾಗಿಯೇ ಇರುತ್ತಾನೆ..
ಕಾಯಕದ ಮೇಲೆ ಪ್ರೀತಿ ತೋರದಿದ್ದರೆ
ನಿರುದ್ಯೋಗಿಯಾಗಿಯೇ ಬಾಳುತ್ತಾನೆ..
ಕುಟುಂಬ ಸಂಸಾರದಲ್ಲ ಒಲವು ಇಲ್ಲದಿದ್ದರೆ
ಅನಾಥನಾಗಿಯೇ ಉಳಿಯುತ್ತಾನೆ.
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 14-02-2025 to 20-02-2025 ಬೆಲೆ: 7-00 ಸಂಪುಟ–4 ಸಂಚಿಕೆ–34 ಪುಟಗಳು–6










ಬೆಂಗಳೂರಿನಲ್ಲಿ ನಡೆಯುತ್ತಿರುವ ಏರ್ ಶೊ ಕಾರಣದಿಂದ ರಸ್ತೆಯಲ್ಲಿ ವಾಹನಗಳು ಸಾಲುಗಟ್ಟಿ ನಿಂತು ವಾಹನ ಸವಾರರಿಗೆ ಕಿರಿಕಿರಿ ಉಂಟಾಗಿರುವುದಂತೂ ನಿಜ. ಅದರ ಜತೆಗೆ ನಮ್ಮ ದೇಶದ ಮತ್ತು ಇತರ ಹಲವಾರು ದೇಶಗಳ ಯುದ್ಧವಿಮಾನಗಳು ಆಕಾಶದಲ್ಲಿ ಅಚ್ಚರಿ ಮೂಡಿಸುತ್ತಿದೆ. ಈ ಪ್ರದರ್ಶನವನ್ನು ಬೆಂಗಳೂರಿನಲ್ಲಿ ಯಲಹಂಕ ವಾಯುಪಡೆ ನಿಲ್ದಾಣದಲ್ಲಿ ರಕ್ಷಣಾ ಸಚಿವಾಲಯದ ರಕ್ಷಣಾ ಪ್ರದರ್ಶನ ಸಂಸ್ಥೆ ಆಯೋಜಿಸುತ್ತದೆ. ಮೊದಲ ಆವೃತ್ತಿಯ ವಾಯು ಪ್ರದರ್ಶನವನ್ನು 1996ರಲ್ಲಿ ನಡೆಸಲಾಯಿತು. ಈಗ ಏರೋ ಇಂಡಿಯಾ ಮಹತ್ವದ ಮಿಲಿಟರಿ ವಾಯುಯಾನ ಪ್ರದರ್ಶನವಾಗಿ ಹೊರಹೊಮ್ಮಿದೆ. ಈಗ 15ನೇ ಆವೃತ್ತಿಯು ಫೆ 10ರಿಂದ 14ರವರೆಗೆ ನಡೆಯುತ್ತಿದ್ದು, ಸಾರ್ವಜನಿಕರಿಗೆ ಕೊನೆಯ ಎರಡು ದಿನಗಳಲ್ಲಿ ವೈಮಾನಿಕ ಪ್ರದರ್ಶನಗಳನ್ನು ವೀಕ್ಷಿಸುವ ಅವಕಾಶವಿರುತ್ತದೆ.

## ರಾಜ್ಯ ಗಂಭೀರ ಪರಿಸ್ಥಿತಿಯನ್ನು ಎದುರಿಸುತ್ತಿದೆ –ಡಾ.ಭರತ್ ಶೆಟ್ಟಿ



**ಮಂಗಳೂರು:** ಮತದಾಸೆಗೆ ಆಸೆ ಪಡುವ ಕಾಂಗ್ರೇಸ್ ರಾಜ್ಯದಲ್ಲಿ ನಡೆಯುವ ಗಲಭೆ ಮತ್ತು ಗಲಭೆ ಕೊರರನ್ನು ನಿಯಂತ್ರಿಸುವ ತಾಕತನ್ನು ಕಳೆದು ಕೊಂಡಿದೆ. ಇದಕ್ಕೆ ಮೈಸೂರ್ ಉದಯಗಿರಿ ಕಲ್ಲು ತುರಾಟ ಪ್ರಕರಣ ಸಾಕ್ಷಿ, ಪ್ರಸ್ತುತ ಕರ್ನಾಟಕ ಗಂಭೀರ ಪರಿಸ್ಥಿತಿಯನ್ನು ಎದುರಿಸುತ್ತಿದೆ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಮಂಗಳೂರು ಉತ್ತರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಭರತ್ ಶೆಟ್ಟಿ ವೈ ಕಿಡಿ ಕಾರಿದ್ದಾರೆ. ಕಾಂಗ್ರೆಸ್ ನಾಯಕರ ಭಾವಚಿತ್ರವನ್ನು ಉರ್ದು ಭಾಷೆಯಲ್ಲಿ ಬರೆದು ಹಾಕಿದ ಮಾತ್ರಕ್ಕೆ ಗೋಣಿ **3ನೇ ಪುಟಕ್ಕೆ**

## ಸಮ್ಮೇಳನ ಕನ್ನಡಾಭಿಮಾನವನ್ನು ಹೆಚ್ಚಿಸಲಿ –ಯು.ಟಿ.ಖಾದರ್



**ಮಂಗಳೂರು:** ಸಾಹಿತ್ಯ ಸಮ್ಮೇಳನಗಳು ಸಾಹಿತ್ಯ ಗೋಷ್ಠಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳ ಜೊತೆಗೆ ಊರಿನ ಜನರಲ್ಲಿ ಕನ್ನಡಾಭಿಮಾನವನ್ನು ಹೆಚ್ಚಿಸಬೇಕು ಎಂದು ಕರ್ನಾಟಕ ವಿಧಾನಸಭಾ ಅಧ್ಯಕ್ಷರಾದ ಯು.ಟಿ.ಖಾದರ್ ಅವರು ಹೇಳಿದರು. ದಕ್ಷಿಣ ಕನ್ನಡ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಇದರ ವತಿಯಿಂದ ಫೆ. 21, 22ರಂದು ಮಂಗಳೂರು ವಿವಿಯ ಮಂಗಳಾ ಸಭಾಂಗಣದಲ್ಲಿ ನಡೆಯುವ 27ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಆಮಂತ್ರಣ ಪತ್ರಿಕೆಯನ್ನು ಬುಧವಾರ ವಿವಿಯ ಹಳೆಸೆನೆಟ್ ಸಭಾಂಗಣದಲ್ಲಿ ಬಿಡುಗಡೆಗೊಳಿಸಿ ಅವರು ಮಾತನಾಡಿ, ಜಿಲ್ಲೆಯ ಶಾಲಾ ವಿದ್ಯಾರ್ಥಿಗಳು, ಸಾಹಿತಿಗಳು, ಸಾರ್ವಜನಿಕರು ಸೇರಿದಂತೆ **3ನೇ ಪುಟಕ್ಕೆ**

## ಸರ್ಕಾರದಿಂದ ಜನರಿಗೆ ತೃಪ್ತಿಪಡಿಸುವ ಕೆಲಸ: ಚಲುವರಾಯಸ್ವಾಮಿ



**ಮಂಡ್ಯ:** ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಜನರನ್ನು ತೃಪ್ತಿಪಡಿಸುವ ಕೆಲಸ ಮಾಡುತ್ತಿದೆ. ಇದನ್ನು ಸಹಿಸದೆ ಜೆಡಿಎಸ್–ಬಿಜೆಪಿ ಪಕ್ಷಗಳ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಟಾಂಗ್ ನೀಡಿದರು. ಗ್ಯಾರಂಟಿ ಯೋಜನೆಗಳಿಂದ ರಾಜ್ಯ ಸರ್ಕಾರ ದಿವಾಳಿ ಎಂಬ ವಿರೋಧ ಪಕ್ಷದ ಶಾಸಕರ ಹೇಳಿಕೆಗೆ ಕೆ. ಆರ್. ಪೇಟೆಯಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸಲಿ ಎಂದು ದೇವೇಗೌಡರು, ಕುಮಾರಸ್ವಾಮಿ ಅವರು ಜನರ ಮುಂದೆ ಬಂದು **3ನೇ ಪುಟಕ್ಕೆ**







# ಸುದ್ದಿ ತುಣುಕು

ಏರೋ ಇಂಡಿಯಾ ವೈಮಾನಿಕ ಪ್ರದರ್ಶನದ ಹಿನ್ನೆಲೆಯಲ್ಲಿ ಸಂಚಾರ ದಟ್ಟಣೆ ಹೆಚ್ಚಾದ ಪರಿಣಾಮ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತಲುಪಲು ಪ್ರಯಾಣಿಕರು ಬದಲಿ ಮಾರ್ಗಬಳಸುವಂತೆ ಸೂಚಿಸಲಾಗಿದೆ.

ಮೆಟ್ರೋ ಟಿಕೆಟ್ ದರ ಏರಿಕೆ ಬಗ್ಗೆ ಆಕ್ರೋಶ ವ್ಯಕ್ತವಾದ ಬೆನ್ನಲ್ಲೇ ಅಸಹಜವಾಗಿ ಹೆಚ್ಚಳವಾಗಿರುವ ಕಡೆ ದರ ಕಡಿತಗೊಳಿಸುವಂತೆ ಮೆಟ್ರೋಎಂಡಿಗೆ ಸಿಎಂ ಸೂಚನೆ ನೀಡಿದ್ದಾರೆ.

ಜಾನಪದ ಗಾಯಕಿ, ಪದ್ಮಶ್ರೀ ಸುಕ್ರಿ ಬೊಮ್ಮಗೌಡ ಇಂದು ನಸುಕಿನ ಜಾವ ಇಹಲೋಕ ತ್ಯಜಿಸಿದ್ದಾರೆ.

ಸಚಿವ ಚಲುವರಾಯಸ್ವಾಮಿ ವಿರುದ್ಧದ ಭ್ರಷ್ಟಾಚಾರ ಆರೋಪ ಸಂಬಂಧ ಮಾಜಿ ಶಾಸಕ ಸುರೇಶ್ ಗೌಡ ವಿರುದ್ಧ ದಾಖಲಾಗಿರುವ ಮಾನ ನಷ್ಟ ಪ್ರಕರಣ ರದ್ದುಗೊಳಿಸಲು ಹೈಕೋರ್ಟ್ ನಿರಾಕರಿಸಿದೆ.

ಬೆಂಗಳೂರಲ್ಲಿ 2028ರ ವೇಳೆಗೆ ಏರ್ ಟ್ಯಾಕ್ಸಿ ಹೆಲಿಕಾಪ್ಟರ್ ಹಾರಾಡಲು ಸಜ್ಜಾಗಿವೆ. ಈ ಮೂಲಕ ವೇಗದ ಜೊತೆಗೆ ಟ್ರಾಫಿಕ್ ಜಾಮ್ ಕಿರಿಕಿರಿ ತಪ್ಪಲಿದೆ.

ರಾಜ್ಯದಲ್ಲಿ ಸ್ವಯಂಚಾಲಿತ ಡ್ರೈವಿಂಗ್ ಟೆಸ್ಟ್ ಟ್ರ್ಯಾಕ್‌ಗಳು ಹಾಗೂ ಟೆಸ್ಟಿಂಗ್ ಕೇಂದ್ರಗಳ ಆರಂಭದ ಬಗ್ಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಮಂಗಳೂರಿನಲ್ಲಿ ಮಾಹಿತಿ ನೀಡಿದರು.

ಜನರಲ್ ನರ್ಸಿಂಗ್ ಹಾಗೂ ಮಿಡ್ ವೈಫರಿ (ಪ್ರಸೂತಿ ಶಾಸ್ತ್ರ) ಪರೀಕ್ಷೆಗಳನ್ನು ನಡೆಸುವ ಅಧಿಕಾರವನ್ನು ಕರ್ನಾಟಕ ರಾಜ್ಯ ಶುಶ್ರೂಷಾ ಪರೀಕ್ಷಾ ಮಂಡಳಿ ಬದಲಿಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ನೀಡಿರುವುದನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಾಗಿದೆ.

ಎಐ ವಿನಾಶಕ (ಟರ್ಮಿನೇಟರ್) ಹಂತಕ್ಕೆ ತಲಪುವ ಸಾಧ್ಯತೆ ಬಹಳಷ್ಟು ದೂರದಲ್ಲಿದೆ ಎಂದು ಯುಎಸ್ ಇಂಧನ ಇಲಾಖೆಯ ಮಾಜಿ ಮುಖ್ಯ ಮಾಹಿತಿ ಅಧಿಕಾರಿ ಅನ್ನ್ ಡಂಕಿನ್ ಸ್ಪಷ್ಟಪಡಿಸಿದ್ದಾರೆ.

'ಕ್ವಿನ್ ಸಿಟಿ' ಯೋಜನೆ ಸಂಬಂಧ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ಪ್ರಮುಖ ದುಂಡು ಮೇಜಿನ ಸಭೆ ನಡೆಸಲಾಯಿತು. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಡಿ.ಕೆ.ಶಿವಕುಮಾರ್ ಸೇರಿದಂತೆ ಇತರ ಸಚಿವರು ಭಾಗವಹಿಸಿದ್ದರು.

ಅಪಘಾತದಿಂದ ವಾಹನದೊಳಗೆ ಸಿಲುಕ್ಕಿದ್ದ ಡ್ರೈವರ್ ಕಾಲನ್ನು ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಅವರು ಜನರೊಂದಿಗೆ ಸೇರಿ ಸುರಕ್ಷಿತವಾಗಿ ಹೊರ ತೆಗೆದಿದ್ದಾರೆ.

ವಿಪ್ರೋ-ಜಿಇ ಹೆಲ್ತ್ ಕೇರ್ ಸಂಸ್ಥೆಯು ಕರ್ನಾಟಕದ ಆರೋಗ್ಯ ಸೇವೆಗಳ ಕ್ಷೇತ್ರದಲ್ಲಿ ಮುಂದಿನ 5 ವರ್ಷಗಳಲ್ಲಿ ಇನ್ನೂ 8,000 ಕೋಟಿ ರೂ. ಹೂಡಿಕೆ ಮಾಡಲಿದೆ.

ಮಹಾ ಕುಂಭಮೇಳ ಹಿನ್ನೆಲೆಯಲ್ಲಿ ಪ್ರಯಾಣಿಕರ ದಟ್ಟಣೆ ತಗ್ಗಿಸಲು ಮೈಸೂರಿನಿಂದ ಲಕ್ನೋ ಹಾಗೂ ತುಂಡ್ಲಾ ನಡುವೆ ವಿಶೇಷ ರೈಲುಗಳ ವ್ಯವಸ್ಥೆ ಕಲ್ಪಿಸಲಾಗಿದೆ.

ರಾಜ್ಯದಲ್ಲಿ ನಿಷ್ಠಾವಂತ ಅಧಿಕಾರಿಗಳಿಗೆ ರಕ್ಷಣೆ ಕೊಡಿ ಎಂದು ಆಗ್ರಹಿಸಿ ಪ್ರತಿಪಕ್ಷ ನಾಯಕರು ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಮುಂಭಾಗ ಪ್ರತಿಭಟನೆ ನಡೆಸಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ನಿಯಂತ್ರಣ ರೇಖೆ ಉದ್ದಕ್ಕೂ ಭಾರತೀಯ ಪೋಸ್ಟ್‌ಗಳ ಮೇಲೆ ಪಾಕಿಸ್ತಾನ ಪಡೆಗಳು ಅಪ್ರಚೋದಿತ ಗುಂಡಿನ ದಾಳಿ ನಡೆಸುವ ಮೂಲಕ ಕದನ ವಿರಾಮವನ್ನು ಉಲ್ಲಂಘಿಸಿವೆ.

ಲೋಕಸಭೆಯ ವಿರೋಧ ಪಕ್ಷದ ಉಪ ನಾಯಕ ಗೌರವ್ ಗೊಗೊಯ್ ಅವರ ಪತ್ನಿ ಪಾಕಿಸ್ತಾನ ಮತ್ತು ಐಎಸ್ಐ ಜೊತೆ ಸಂಪರ್ಕ ಹೊಂದಿರುವ ಆರೋಪ ಕೇಳಿಬಂದಿದೆ.

# ಕೇಸರಿಬಾತ್



**ಬೇಕಾಗುವ ಸಾಮಗ್ರಿಗಳು :**
ತುಪ್ಪ – 3–4ಚಮಚ
ಗೋಡಂಬಿ ಚೂರು – 2 ಚಮಚ
ಒಣದ್ರಾಕ್ಷಿ – 10
ರವೆ – ಒಂದು ಕಪ್
ನೀರು – 3 ಕಪ್
ಸಕ್ಕರೆ – 1 ಕಪ್
ಕೇಸರಿ – ಬಿಸಿ ನೀರಿನಲ್ಲಿ ನೆನೆಸಿದ್ದು ಅರ್ಧಚಮಚ

**ಮಾಡುವ ವಿಧಾನ :**
ಬಾಣಲೆಯಲ್ಲಿ 1 ದೊಡ್ಡ ಚಮಚ ತುಪ್ಪ ಬಿಸಿ ಮಾಡಿಕೊಂಡು ಅದಕ್ಕೆ ಗೋಡಂಬಿ ಚೂರುಗಳನ್ನು ಹಾಕಿ ಚೆನ್ನಾಗಿ ಹುರಿದು ತೆಗೆದಿಡಬೇಕು. ನಂತರ ಬಾಣಲೆಯಲ್ಲಿ ಉಳಿದ ತುಪ್ಪಕ್ಕೆ ಒಣ ದ್ರಾಕ್ಷಿ ಹಾಕಿ ಚೆನ್ನಾಗಿ ಹುರಿದು ಬೇರೆ ತೆಗೆದಿಟ್ಟು, ಅದೇ ಬಾಣಲೆಗೆ ಉಳಿದ ತುಪ್ಪಕ್ಕೆ ಉಪ್ಪಿಟ್ಟು ರವೆ ಅಥವಾ ಹಾಕಿ ಸಣ್ಣ ಉರಿಯಲ್ಲಿ, ಸೌಟಿನಿಂದ ಮಗುಚುತ್ತಾ ಸುಮಾರು 4 ರಿಂದ 5 ನಿಮಿಷಗಳವರೆಗೆ ರವೆಯ ಬಣ್ಣ ಬದಲಾಗದಂತೆ ಚೆನ್ನಾಗಿ ಹುರಿಯಬೇಕು. ಚೆನ್ನಾಗಿ ಹುರಿದ ರವೆಯನ್ನು ಬಾಣಲೆಯಿಂದ ತೆಗೆದು ಒಂದು ತಟ್ಟೆಗೆ ಹಾಕಿಡಿ. ಈಗ ಬಾಣಲೆಗೆ ನೀರು ಹಾಕಿ ಅದಕ್ಕೆ ರವೆ ಸೇರಿಸಿ ಕುದಿಸಬೇಕು ನಂತರ ಅದಕ್ಕೆ ಸಕ್ಕರೆ, ಏಲಕ್ಕಿ, ಕೇಸರಿ, ದ್ರಾಕ್ಷಿ ಗೋಡಂಬಿ, 2 ಚಮಚ ತುಪ್ಪ ಹಾಕಿ ಚೆನ್ನಾಗಿ ಮಿಕ್ಸ್ ಮಾಡುತ್ತಾ 5 ನಿಮಿಷ ಬೇಯಿಸಿದರೆ + ರುಚಿಯಾದ ಕೇಸರಿಬಾತ್ ಸವಿಯಲು ಸಿದ್ದ.

# ಸುಂದರ್ ಪಿಚೈ ಪ್ರಧಾನಿ ನರೇಂದ್ರ ಮೋದಿ ಭೇಟಿ



ಫ್ರಾನ್ಸ್: ಪ್ಯಾರಿಸ್‌ನಲ್ಲಿ ನಡೆದ ಎಐ ಆಕ್ಷನ್ ಶೃಂಗಸಭೆಯ ಹಿನ್ನೆಲೆಯಲ್ಲಿ ಗೂಗಲ್ ಸಿಇಒ ಸುಂದರ್ ಪಿಚೈ, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಕೃತಕ ಬುದ್ಧಿಮತ್ತೆ (ಎಐ) ಭಾರತಕ್ಕೆ ತರಲಿರುವ ಇನ್ ಕ್ರೆಡಿಬಲ್ ಅವಕಾಶಗಳೇನು ಎಂಬುದನ್ನು ವಿವರಿಸಿದ್ದಾರೆ. ದೇಶದ ಡಿಜಿಟಲ್ ರೂಪಾಂತರವನ್ನು ಮುನ್ನಡೆಸಲು ಗೂಗಲ್ ಮತ್ತು ಭಾರತದ ನಡುವಿನ ನಿಕಟ ಸಹಯೋಗದ ಸಾಮರ್ಥ್ಯ ವನ್ನು ಸಹ ಆಲ್ಫಾಬೆಟ್ CEO ಗಮನಿಸಿದ್ದಾರೆ ಎಂದು ಪಿಚೈ ಹೇಳಿದ್ದಾರೆ.

# ಲಂಚ ನೀಡುವುದನ್ನು ನಿಷೇಧಿಸುವ ಕಾನೂನು ರದ್ದು

ವಾಷಿಂಗ್ಟನ್: ಅಮೆರಿಕದ ಕಂಪನಿಗಳು ವಿದೇಶಿ ಅಧಿಕಾರಿಗಳಿಗೆ ಲಂಚ ನೀಡುವುದನ್ನು ನಿಷೇಧಿಸುವ ಕಾನೂನಿಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಡೆ ನೀಡಿದ್ದಾರೆ. ಈ ಕಾನೂನು ಅಮೆರಿಕದ ಕಂಪನಿಗಳ ಹಿತಾಸಕ್ತಿಗೆ ವ್ಯತಿರಿಕ್ತವಾಗಿದೆ ಎಂದು ಟ್ರಂಪ್ ಪ್ರತಿಪಾದಿಸಿದ್ದಾರೆ. ಈ ಕಾನೂನು ಜಾರಿಗೆ ನಿರ್ಬಂಧ ವಿಧಿಸಿದ ನಂತರ ಅಮೆರಿಕದ ಷೇರು ಮಾರುಕಟ್ಟೆಯಲ್ಲಿ ಅದಾನಿ ಗ್ರೂಪ್‌ನ ಎಲ್ಲ ಷೇರುಗಳು ಏರಿಕೆಯಾಗಿವೆ. ವಿದೇಶಿ ಭ್ರಷ್ಟಾಚಾರ ಅಭ್ಯಾಸಗಳ ಕಾಯ್ದೆ



(ಎಫ್‌ಸಿಪಿಎ) ಜಾರಿ ನಿರ್ಬಂಧಿಸುವ ಕಾರ್ಯನಿರ್ವಾಹಕ ಆದೇಶಕ್ಕೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಹಿ ಹಾಕಿದ್ದಾರೆ.

# ಬಾಂಗ್ಲಾದೇಶದ 'ಆಪರೇಷನ್ ಡೆವಿಲ್ ಹಂಟ್'



ಢಾಕಾ: ಬಾಂಗ್ಲಾದೇಶದ ಭದ್ರತಾ ಪಡೆ ಹೊಸದಾಗಿ "ಆಪರೇಷನ್ ಡೆವಿಲ್ ಹಂಟ್" ಎಂಬ ಹೆಸರಿನಡಿ 1,308 ಜನರನ್ನು ಬಂಧಿಸಿವೆ. ರಾಷ್ಟ್ರದಲ್ಲಿನ ತೀವ್ರ ವಿಧ್ವಂಸಕತೆಯ ಮಧ್ಯೆ ರಾತ್ರೋರಾತ್ರಿ ಈ ಆಪರೇಷನ್‌ನ್ನು ಕಾರ್ಯಗತಗೊಳಿಸಲಾಗಿದೆ. ಕಳೆದ ನಾಲ್ಕು ದಿನಗಳಿಂದ ಬಾಂಗ್ಲಾ ಅಶಾಂತಿಯಿಂದ ಕೂಡಿದೆ. ಮಧ್ಯಂತರ ಸರ್ಕಾರವು 'ಎಲ್ಲಾ ದೆವ್ವಗಳನ್ನು' ಬೇರು ಸಹಿತ ಕಿತ್ತೊಗೆಯುವವರೆಗೂ ಈ ಆಪರೇಷನ್ನು ಮುಂದುವರೆಸುವುದಾಗಿ ಪ್ರತಿಜ್ಞೆ ಮಾಡಿದೆ.

# ವೆಸ್ಟ್‌ಬ್ಯಾಂಕ್‌ನಲ್ಲಿ ಇಸ್ರೇಲ್ ಮಿಲಿಟರಿ ಕಾರ್ಯಾಚರಣೆ ತೀವ್ರ

ಜೆರುಸಲೇಂ: ಆಕ್ರಮಿತ ಪಶ್ಚಿಮ ದಂಡೆಯಲ್ಲಿ ಇಸ್ರೇಲ್ ಪಡೆಗಳು ಭಾನುವಾರ ತಮ್ಮ ಸೇನಾ ಕಾರ್ಯಾಚರಣೆಯನ್ನು ವಿಸ್ತರಿಸಿದ್ದು, ನೂರ್ ಶಮ್ಸ್ ನಿರಾಶ್ರಿತರ ಶಿಬಿರದ ಮೇಲೆ ದಾಳಿ ನಡೆಸಿವೆ ಎಂದು ಸೇನಾ ವಕ್ತಾರರು ತಿಳಿಸಿದ್ದಾರೆ. ಐಡಿಎಫ್, ಶಿನ್ ಬೆಟ್ ಭದ್ರತಾ ಸಂಸ್ಥೆ ಮತ್ತು ಗಡಿ ಪೊಲೀಸರ ದೊಡ್ಡ ಪಡೆಗಳು ನೂರ್ ಶಮ್ಸ್ ನಲ್ಲಿ ರಾತ್ರಿಯಿಡೀ ಮಿಲಿಟರಿ ಕಾರ್ಯಾಚರಣೆ ಪ್ರಾರಂಭಿಸಿವೆ ಎಂದು ಇಸ್ರೇಲ್ ರಕ್ಷಣಾ ಪಡೆ (ಐಡಿಎಫ್) ಹೇಳಿಕೆಯಲ್ಲಿ ತಿಳಿಸಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.



# ಬಾಂಗ್ಲಾದೇಶದಲ್ಲಿ 152 ದೇವಾಲಯಗಳ ಮೇಲೆ ದಾಳಿ !




ನವದೆಹಲಿ: 2024ರ ಆಗಸ್ಟ್‌ನಿಂದ ನೆರೆಯ ಬಾಂಗ್ಲಾದೇಶದಲ್ಲಿ ಒಟ್ಟು 23 ಹಿಂದೂಗಳ ಸಾವಾಗಿದೆ ಮತ್ತು 152 ಹಿಂದೂ ದೇವಾಲಯಗಳ ಮೇಲಿನ ದಾಳಿ ಆಗಿದೆ ಎಂದು ವರದಿಗಳು ಉಲ್ಲೇಖಿಸಿವೆ ಎಂದು ಸಂಸತ್‌ಗೆ ಕೇಂದ್ರ ಸರ್ಕಾರ ಶುಕ್ರವಾರ ತಿಳಿಸಿದೆ. ಅಧಿವೇಶನದಲ್ಲಿ ಬಾಂಗ್ಲಾದೇಶದಲ್ಲಿ ಕಳೆದ 2 ತಿಂಗಳಲ್ಲಿ ಹಿಂದೂ ದೇವಾಲಯಗಳ ಮೇಲಿನ ದಾಳಿ ಮತ್ತು ಘಟನೆಯಲ್ಲಿ ಗಾಯಗೊಂಡ, ಸತ್ತ ಹಿಂದೂಗಳ ಸಂಖ್ಯೆ, ಅವರಿಗೆ ಉಂಟಾಗಿರುವ ಕಿರುಕುಳದ ಪ್ರಕರಣಗಳ ವಿವರಗಳ ಬಗ್ಗೆ ಸರ್ಕಾರವನ್ನು ಕೇಳಲಾಯಿತು.

# ಫ್ರೆಂಚ್ ಸೈನ್ಯಕ್ಕೆ ಮೋದಿ ಆಹ್ವಾನ

ಫ್ರಾನ್ಸ್: ಭಾರತೀಯ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ ವಿನ್ಯಾಸಗೊಳಿಸಿದ 'ಪಿನಾಕಾ ಮಲ್ಟಿ ಬ್ಯಾರೆಲ್ ರಾಕೆಟ್ ಲಾಂಚರ್' ಅನ್ನು ಫ್ರಾನ್ಸ್ ಖರೀದಿಸಲು ಮುಂದಾಗಿದ್ದು, ತಮ್ಮ ಕಣ್ಣಾರೆ ಕಂಡು ಇದರ ಬಗ್ಗೆ ಮತ್ತಷ್ಟು ಅಧ್ಯಯನ ಮಾಡಲು ಭಾರತಕ್ಕೆ ಆಗಮಿಸುವಂತೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಫ್ರೆಂಚ್ ಸೈನ್ಯಕ್ಕೆ ಆಹ್ವಾನ ನೀಡಿದ್ದಾರೆ. ಫ್ರಾನ್ಸ್ ದೇಶ ಪಿನಾಕಾ ಖರೀದಿಗೆ ಮುಂದಾಗಿರುವುದು ಇಂಡೋ-ಫ್ರೆಂಚ್ ರಕ್ಷಣಾ ಸಂಬಂಧಗಳನ್ನು ಮತ್ತಷ್ಟು ಗಟ್ಟಿ ಮಾಡಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.



# 3ನೇ ಏಕದಿನ ಪಂದ್ಯವನ್ನೂ ಗೆದ್ದ ಟೀಂ ಇಂಡಿಯಾ




ಇಂಗ್ಲೆಂಡ್ ವಿರುದ್ಧ ನಡೆದ ಮೂರನೇ ಮತ್ತು ಅಂತಿಮ ಪಂದ್ಯದಲ್ಲಿ ಭಾರತ ಭರ್ಜರಿ ಗೆಲುವು ಸಾಧಿಸಿತು. ಅಹಮದಾಬಾದ್‌ನ ನರೇಂದ್ರ ಮೋದಿ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಆಲ್ರೌಂಡರ್ ಪ್ರದರ್ಶನ ತೋರಿದ ಭಾರತೀಯರು ಆಂಗ್ಲರನ್ನು ಬಗ್ಗು ಬಡಿದು 142 ರನ್‌ಗಳಿಂದ ಬೃಹತ್ ಗೆಲುವು ದಾಖಲಿಸಿದರು. ಭಾರತ 50 ಓವರ್‌ಗಳಲ್ಲಿ 356 ರನ್‌ಗಳ ಬೃಹತ್ ಮೊತ್ತ ಕಲೆಹಾಕಿತು. ಬೃಹತ್ ಸ್ಕೋರ್‌ಗೆ ಬೆಚ್ಚಿದ ಆಂಗ್ಲರು 214 ರನ್ ಗಳಿಗೆ ತಮ್ಮ ಆಟ ಮುಕ್ತಾಯಗೊಳಿಸಿದರು.

# ನಿಕಿ-ಸೋಹಾ ಜೋಡಿಗೆ ಬೆಳ್ಳಿ

ಡೆಹ್ರಾಡೂನ್: ಕರ್ನಾಟಕದ ನಿಕಿ ಪೂಣಚ್ಚ ಮತ್ತು ಸೋಹಾ ಸಾದಿಕ್ ಜೋಡಿ, ರಾಷ್ಟ್ರೀಯ ಕ್ರೀಡೆಗಳ ಟೆನಿಸ್ ಸ್ಪರ್ಧೆಗಳ ಮಿಶ್ರ ಡಬಲ್ಸ್‌ನಲ್ಲಿ ಬೆಳ್ಳಿ ಪದಕ ಗೆದ್ದು ಕೊಂಡಿತು. ತಮಿಳುನಾಡಿನ ಲೋಹಿತ್ ಅಕ್ಷ್ ಬದ್ರೀನಾಥ್ ಮತ್ತು ಲಕ್ಷ್ಮಿಪ್ರಭಾ ಅರುಣಕುಮಾರ್ ಚಿನ್ನ ಗೆದ್ದು ಕೊಂಡರು. ಹರಿಯಾಣದ ಸುನೀಲ್ ಕುಮಾರ್ ಮತ್ತು ಅದಿತಿ ರಾವತ್, ಪ.ಬಂಗಾಳದ ನಿತಿನ್‌ಕುಮಾರ್ ಸಿನ್ಹಾ ಮತ್ತು ಯುವರಾಣಿ ಬ್ಯಾನರ್ಜಿ ಕಂಚಿನ ಪದಕ ಹಂಚಿಕೊಂಡರು.



# ಅನಿಮೇಶ್ ಕುಜೂರ್‌ಗೆ ಚಿನ್ನ



ಡೆಹ್ರಾಡೂನ್: ಪುರುಷರ 200 ಮೀ ಓಟದಲ್ಲಿ ಚಿನ್ನದ ಪದಕ ಜಯಿಸಿದ ಒಡಿಶಾದ ಓಟಗಾರ ಅನಿಮೇಶ್ ಕುಜೂರ್ 2025ರ ಆವೃತ್ತಿಯ ರಾಷ್ಟ್ರೀಯ ಗೇಮ್ಸ್‌ನಲ್ಲಿ ತನ್ನ 3ನೇ ಸ್ವರ್ಣ ಸಂಪಾದಿಸಿದರು. ಕುಜೂರ್ 20.58 ಸೆಕೆಂಡ್ ನಲ್ಲಿ ಗುರಿ ತಲುಪಿ ಪುರುಷರ 200 ಮೀ. ಓಟದಲ್ಲಿ ಮೊದಲ ಸ್ಥಾನ ಪಡೆದರು. ರಗುಲ್ ಕುಮಾರ್ ಹಾಗೂ ನಿತಿನ್ ಕ್ರಮವಾಗಿ ಬೆಳ್ಳಿ ಹಾಗೂ ಕಂಚಿನ ಪದಕ ಜಯಿಸಿದರು.

# ಅವೈಜ್ಞಾನಿಕ ಮೀನುಗಾರಿಕೆಯಿಂದ ಸಮುದ್ರದಲ್ಲಿ ಮತ್ಸ್ಯಕ್ಷಾಮ



ಉತ್ತರ ಕನ್ನಡ: ಕರಾವಳಿಯಲ್ಲಿ ಮೀನುಗಾರಿಕೆ ಅವಧಿ ಆರಂಭವಾಗಿ ಐದು ತಿಂಗಳು ಮಾತ್ರ ಕಳೆದಿದೆ. ತರಹೇವಾರಿ ಮೀನುಗಳನ್ನು ಹೊತ್ತು ತರಬೇಕಿದ್ದ ಬೋಟುಗಳು ಮತ್ಸ್ಯಬೇಟೆಯ ಅವಧಿಯಲ್ಲೇ ಬಂದರಿನಲ್ಲೇ ಲಂಗರು ಹಾಕತೊಡಗಿದ್ದು ಬಲ್‌ಟ್ರಾಲ್, ಲೈಟ್ ಫಿಶಿಂಗ್ ನಡೆಸುವ ತಮ್ಮದೇ ಮೀನುಗಾರರ ವಿರುದ್ಧ ಇದೀಗ ಆಕ್ರೋಶ ಹೊರಹಾಕುತ್ತಿದ್ದಾರೆ. ಕಳೆದ 15 ದಿನಗಳಿಂದ ಆಳಸಮುದ್ರಕ್ಕೆ ತೆರಳಿದರೂ ಸಹ ಬೋಟುಗಳಿಗೆ ಮೀನುಗಳೇ ಸಿಗುತ್ತಿಲ್ಲ. ಒಂದು ಬಾರಿ ಮೀನುಗಾರಿಕೆಗೆ ತೆರಳಲು ಒಂದು ಲಕ್ಷದವರೆಗೂ ಖರ್ಚಾಗುತ್ತದೆ. ಆದರೆ ಕೇವಲ 25 ರಿಂದ 30 ಸಾವಿರ ರೂಪಾಯಿ ಆಗುವಷ್ಟು ಮಾತ್ರ ಮೀನುಗಳು ಸಿಗುತ್ತಿದೆ.

# ಪ್ರಧಾನಿ ಬದಲಿಸಿ ಎಂದು ಸಂತೋಷ್ ಲಾಡ್ ಲೇವಡಿ

ಹಾಸನ: ಸಾಹೇಬ್ರು ದಿನಕ್ಕೆ ಮೂರು ಬಾರಿ ಬಟ್ಟೆ ಬದಲಾಯಿಸುತ್ತಾರೆ, 16 ಗಂಟೆ ಕೆಲಸ ಮಾಡ್ತಾರೆ ಅಂತಾರೆ, ಆದರೆ ಏನು ಕೆಲಸ ಮಾಡ್ತಾರೆ ಅನ್ನೋದು ಜನರಿಗೆ ಗೊತ್ತಾಗುತ್ತಿಲ್ಲ, ಹಾಗಾಗಿ ಬಿಜೆಪಿಯವರಿಗೆ ಕೈ ಮುಗಿದು ಕೇಳುವೆ, ದೇಶದ ಪ್ರಧಾನಿ ಮೋದಿ ಅವರನ್ನು ಬದಲು ಮಾಡಿ, ಇದೇ ದೇಶಕ್ಕೆ ಸಿಗುವ



ಪರಿಹಾರ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಮೋದಿ ಬಗ್ಗೆ ಲೇವಡಿ ಮಾಡಿದರು. ಮೊದಲು ನಿಮ್ಮ ಮಹಾರಾಜನಾಗಿರುವ ದೇಶದ ಪ್ರಧಾನಿಯನ್ನು ಬದಲಾಯಿಸಿ. ಇದರಿಂದ ದೇಶದಕ್ಕೆ ಪರಿಹಾರ ಸಿಗುತ್ತದೆ ಎಂದು ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ಮೋದಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

# ಸಾಲ ವಸೂಲಿ ನೆಪದಲ್ಲಿ ಕಿರುಕುಳ ನೀಡಿದಲ್ಲಿ ಕಠಿಣ ಕ್ರಮ

ಬಳ್ಳಾರಿ: ಜಿಲ್ಲೆಯಲ್ಲಿನ ಮೈಕ್ರೋ ಫೈನಾನ್ಸ್ ಕಂಪನಿಗಳು ಆರ್‌ಬಿಐ ಮಾರ್ಗಸೂಚಿಯ ಅನ್ವಯ ಕಾರ್ಯನಿರ್ವಹಿಸಬೇಕು. ಸಾಲ ವಸೂಲಾತಿ ನೆಪದಲ್ಲಿ ಮಾನಸಿಕವಾಗಿ ನಿಂದಿಸುವುದು, ಅವಾಚ್ಯ ಶಬ್ದ ಬಳಸುವುದು, ಅವಮಾನಿಸುವ ಪ್ರಕರಣಗಳು ಕಂಡುಬದಲ್ಲಿ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಖಡಕ್ ಸೂಚನೆ ನೀಡಿದರು. ಮೈಕ್ರೋ ಫೈನಾನ್ಸ್ ಕಂಪನಿಗಳಿಂದ ಸಾಲ ವಸೂಲಾತಿ ನೆಪದಲ್ಲಿ ಸಾಲಗಾರರಿಗೆ ಆಗುತ್ತಿರುವ ಕಿರುಕುಳ ಹಾಗೂ ಸಂಸ್ಥೆಗಳ ಪದಾಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



# ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆಗೆ ರಾಜ್ಯಪಾಲರ ಒಪ್ಪಿಗೆ

ಬೆಂಗಳೂರು: ಕೆಲ ಸಲಹೆಗಳೊಂದಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಮೈಕ್ರೋ ಫೈನಾನ್ಸ್ ಕಿರುಕುಳಕ್ಕೆ ನಿಯಂತ್ರಣ ಹೇರುವ ಸುಗ್ರೀವಾಜ್ಞೆಗೆ ಒಪ್ಪಿಗೆ ಸೂಚಿಸಿದ್ದು, ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಕಳೆದ ವಾರ ಹೆಚ್ಚಿನ ಸ್ಪಷ್ಟನೆ ಕೋರಿ ರಾಜ್ಯಪಾ



ಲರು ಕರ್ನಾಟಕ ಮೈಕ್ರೋ ಫೈನಾನ್ಸ್ ಸುಗ್ರೀವಾಜ್ಞೆ-2025 ಕರಡನ್ನು ವಾಪಸ್ ಕಳುಹಿಸಿದ್ದರು. ಸರ್ಕಾರ ಸ್ಪಷ್ಟೀಕರಣದೊಂದಿಗೆ ಉತ್ತರ ನೀಡಿ ತ್ತು. 'ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ ಅಧ್ಯಾದೇಶ 2025' ಜಾರಿಗೊಳಿಸಿ ಅಧಿ ಸೂಚನೆ ಹೊರಡಿಸಲಾಗಿದೆ.

# ಶಿರೂರು ಗುಡ್ಡ ಕುಸಿತ ಪ್ರಕರಣ : ವಿದೇಶಿ ತಜ್ಞರಿಂದ ಪರಿಶೀಲನೆ



ಉತ್ತರ ಕನ್ನಡ: ಅಂಕೋಲಾದ ಶಿರೂರು ಗುಡ್ಡ ಕುಸಿತ ಸಂಭವಿಸಿದ ಸ್ಥಳದಲ್ಲಿ ರಕ್ಷಣಾ ಗೋಡೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮಣ್ಣಿನ ಗುಣಮಟ್ಟ ಪರೀಕ್ಷೆ ನಡೆಸಲು ವಿದೇಶಿ ತಜ್ಞರ ತಂಡ ಜಿಲ್ಲೆಗೆ ಆಗಮಿಸಿದೆ. ಎನ್‌ಹೆಚ್‌ಎಐ ಸಹಕಾರದಲ್ಲಿ ಜಪಾನ್ ಇಂಟರ್ನ್ಯಾಷನಲ್ ಕೋ. ಆಪರೇಷನ್ ಏಜೆನ್ಸಿ (ಜೈಕಾ) ಸಂಸ್ಥೆ ಹಾಗೂ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ರಾಕ್ ಮೆಕ್ಯಾ ನಿಕ್ಸ್ (ಎನ್‌ಐಆರ್‌ಎಮ್) ಸಂಸ್ಥೆಯ ಒಟ್ಟು 7 ತಜ್ಞರ ತಂಡ ಜಿಲ್ಲೆಗೆ ಆಗಮಿಸಿದೆ. ಶಿರೂರು ಗುಡ್ಡ ಕುಸಿತದ ದುರಂತದ ನಂತರ ಭಾರತೀಯ ಭೂ ವಿಜ್ಞಾನ ಸಮೀಕ್ಷೆ ಇಲಾಖೆ (ಜಿಎಸ್‌ಐ) ಅಧಿಕಾರಿಗಳಿಂದ ಪರಿಶೀಲನೆ ನಡೆಸಿ ವರದಿ ನೀಡಿತ್ತು.

# HAL ನಿರ್ಮಿತ ಲಘು ಯುದ್ಧ ಹೆಲಿಕಾಪ್ಟರ್‌ಗೆ ಹೆಚ್ಚಿದ ಬೇಡಿಕೆ

ಬೆಂಗಳೂರು: ಲಘು ಹಾಗೂ ಹಗುರ ಹೆಲಿಕಾಪ್ಟರ್‌ಗಳ ತಯಾರಿಕೆಯಲ್ಲಿ ಮುಂಚೂಣಿಯಲ್ಲಿರುವ ಹಿಂದೂಸ್ತಾನ್ ಏರೋನಾಟಿಕಲ್ ಲಿಮಿಟೆಡ್‌ಗೆ (ಹೆಚ್‌ಎಎಲ್) ದೇಶ ಹಾಗೂ ವಿದೇಶಗಳಿಂದ ಹೆಲಿಕಾಪ್ಟರ್‌ಗಳ ಉತ್ಪಾದನೆಗೆ ಬೇಡಿಕೆ ಬರುತ್ತಿದೆ. ಇದರ ಹಣಕಾಸು ವಹಿವಾಟು ಮುಂದಿನ ಆರು ತಿಂಗಳಲ್ಲಿ ಸು



ಮಾರು 2.5 ಲಕ್ಷ ಕೋಟಿಗೆ ಹೆಚ್ಚಳವಾಗಲಿದೆ, ಪ್ರಸ್ತುತ ಆರ್ಥಿಕ ವರ್ಷದ 9 ತಿಂಗಳಲ್ಲಿ 55 ಸಾವಿರ ಕೋಟಿ ಮೊತ್ತದ ಹೆಲಿಕಾಪ್ಟರ್‌ಗಳನ್ನು ತಯಾರಿಸಿಕೊಡಲು ಆರ್ಡರ್ ಬಂದಿವೆ. ಮುಂದಿನ ಐದಾರು ತಿಂಗಳಲ್ಲಿ 1.2 ಲಕ್ಷ ಕೋಟಿಗೆ ದಾಟಲಿದ ಎಂದು ಸಂಸ್ಥೆಯ ಸಿಎಂಡಿ ಡಾ.ಡಿ.ಕೆ.ಸುನಿಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# 2030ರೊಳಗೆ 7.5 ಲಕ್ಷ ಕೋಟಿ ಹೂಡಿಕೆ : ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಭಾರತದ ಆರ್ಥಿಕತೆಯ ಪರಿವರ್ತನೆಯಲ್ಲಿ ಕರ್ನಾಟಕ ಸದಾ ಮುಂಚೂಣಿಯಲ್ಲಿರುವ ರಾಜ್ಯ. ಇಂದು ದೇಶದಲ್ಲಿಯೇ ಕರ್ನಾಟಕ ಅತ್ಯಂತ ಹೂಡಿಕೆದಾರ ಸ್ನೇಹಿ ರಾಜ್ಯವೆಂಬ ನಮ್ಮ ಬದ್ಧತೆಯನ್ನು ಮತ್ತೊಮ್ಮೆ ದೃಢೀಕರಿಸುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಉತ್ಪಾದನಾ ವಲಯದಲ್ಲಿ ಶೇ.12ರಷ್ಟು ವಾರ್ಷಿಕ ಬೆಳವಣಿಗೆಯ ದರದ ಗುರಿಯನ್ನು ಹೊಂದಿದ್ದು, 2030 ರೊಳಗೆ 7.5ಲಕ್ಷ ಕೋಟಿ ಹೂಡಿಕೆ ಹಾಗೂ 20ಲಕ್ಷ ಉದ್ಯೋಗ ಸೃಜನೆಯ ಗುರಿಯನ್ನು ಹೊಂದಿದೆ ಎಂದು ಹೇಳಿದರು.



# ಆರ್ಥಿಕ ಅಭಿವೃದ್ಧಿಗೆ ಸಾಕ್ಷಿಯಾದ ಮಹಾ ಕುಂಭಮೇಳ

ಉತ್ತರಪ್ರದೇಶ: ಜಗತ್ತಿನ ಅತಿ ದೊಡ್ಡ ಉತ್ಸವ ಹಾಗೂ 144 ವರ್ಷಗಳಿಗೆ ಒಮ್ಮೆ ನಡೆಯುವ ಮಹಾಕುಂಭ ಮೇಳ ಅನೇಕ ದೇಶಗಳ ಜನಸಂಖ್ಯಾ ಗಾತ್ರವನ್ನು ಮೀರಿಸಿದೆ. ಇದು ಆರ್ಥಿಕವಾಗಿ ಉತ್ತರಪ್ರದೇಶದ ಮೇಲೆ ಹೆಚ್ಚಿನ ಪರಿಣಾಮ ಬೀರಿದೆ. ಮಹಾಕುಂಭ ನಡೆಯುತ್ತಿರುವ ಪ್ರಯಾಗ ರಾಜ್ ನಗರದೆಲ್ಲೆಡೆ



ಈಗ ಉದ್ಯಮಗಳ ಪ್ರವಾಹವಾಗಿರುವುದನ್ನು ಕಾಣ ಬಹುದಾಗಿದೆ. ಇದು ಸಾಮಾನ್ಯರು ಮತ್ತು ರಾಜ್ಯಕ್ಕೆ ಹೆಚ್ಚಿನ ಆದಾಯವನ್ನು ತಂದು ಕೊಟ್ಟಿದೆ. ಹಲವು ಜನರ ಹೊಟ್ಟೆಗೆ ಹಿಟ್ಟನ್ನು ತಂದುಕೊಟ್ಟಿದೆ. ವಸತಿ, ಸಾರಿಗೆ ಊಟದ ವ್ಯವಸ್ಥೆಯ ಭಾಗವಾಗಿ ಅನೇಕರು ಉದ್ಯೋಗ ಕಂಡು ಕೊಂಡಿದ್ದಾರೆ.

# ಚರ್ಮಗಂಟು ರೋಗಕ್ಕೆ ಭಾರತದಿಂದ ಮೊದಲ ಲಸಿಕೆ




ನವದೆಹಲಿ : ಜಾನುವಾರುಗಳಲ್ಲಿ ಕಂಡುಬರುವ ಲಂಪಿ ಸ್ಕಿನ್ ಡಿಸೀಸ್ (ಎಲ್‌ಎಸ್‌ಡಿ) ಸಂಬಂಧಿಸಿದಂತೆ ಭಾರತ್ ಬಯೋಟೆಕ್ ಗ್ರೂಪ್‌ನ ಬಯೋವೆಟ್ ಕಂಪೆನಿಯು ಆವಿಷ್ಕಾರ ಮಾಡಿದ್ದ ದೇಶದ ಮೊದಲ ಲಸಿಕೆ ಬಯೋಲಂಪಿವ್ಯಾಕ್ಸಿನ್‌ಗೆ ಕೇಂದ್ರ ಡ್ರಗ್ಸ್ ಸ್ಟ್ಯಾಂಡರ್ಡ್ ಕಂಟ್ರೋಲ್ ಆರ್ಗನೈಸೇಶನ್ (ಸಿಡಿಎಸ್‌ಸಿಒ) ಪರವಾನಗಿ ನೀಡಿದೆ. ಲಸಿಕೆಯ ಗುಣಮಟ್ಟ, ಸುರಕ್ಷತೆ ಮತ್ತು ಪರಿಣಾಮಕಾರಿತ್ವವನ್ನು ICAR- NRCE ಮತ್ತು ಭಾರತೀಯ ಪಶುವೈದ್ಯಕೀಯ ಸಂಶೋಧನಾ ಸಂಸ್ಥೆ (IVRI)ಗಳಲ್ಲಿ ಪರೀಕ್ಷಿಸಲಾಗಿದೆ. ಇದು ಅತ್ಯುನ್ನತ ಜಾಗತಿಕ ಮಾನದಂಡಗಳನ್ನು ಪೂರೈಸುತ್ತಿದೆ ಎಂದು ಖಚಿತಪಡಿಸುತ್ತದೆ.

# ಉಚಿತ ಕೊಡುಗೆಗಳಿಗೆ ಸುಪ್ರೀಂಕೋರ್ಟ್ ಅಸಮಾಧಾನ

ನವದೆಹಲಿ : ರಾಜಕೀಯ ಪಕ್ಷಗಳು ಚುನಾವಣೆಗೂ ಮುನ್ನ ಘೋಷಿಸುವ 'ಉಚಿತಗಳಿಗೆ' ಸುಪ್ರೀಂ ಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಜನರು ಉಚಿತ ಪಡಿತರ ಮತ್ತು ಹಣ ಪಡೆಯುತ್ತಿರುವುದರಿಂದ ಕೆಲಸ ಮಾಡಲು ಹಿಂದೇಟು ಹಾಕುತ್ತಿದ್ದಾರೆ ಎಂದು ಹೇಳಿದೆ. "ಬಡವರನ್ನು ಮುಖ್ಯವಾಹಿನಿಗೆ ತಂದು,



ಅವರೂ ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವಂತೆ ಉತ್ತೇಜಿಸಬೇಕು. ಅದನ್ನು ಬಿಟ್ಟು ಜನರ ಅಗತ್ಯಗಳನ್ನು ಉಚಿತವಾಗಿ ನೀಡುವ ಮೂಲಕ ಪರಾವಲಂಬಿ ಮತ್ತು ಸೋಂಬೇರಿಗಳನ್ನಾಗಿ ಮಾಡಲಾಗುತ್ತಿದೆ, ದುಡಿ ಯಲು ಹೋಗುತ್ತಿಲ್ಲ. ಇದರಿಂದ ಕೃಷಿಗೆ ಕಾರ್ಮಿಕರ ಕೊರತೆಯಾಗಿದೆ." ಎಂದು ಟೀಕಿಸಿತು.

# ಪ್ಲಾಸ್ಟಿಕ್ ಹೂಗಳನ್ನು ನಿಷೇಧಿತ ವಸ್ತುಗಳ ಪಟ್ಟಿಗೆ ಏಕೆ ಸೇರಿಸಿಲ್ಲ

ಮಹಾರಾಷ್ಟ್ರ: ಕೇಂದ್ರ ಸರ್ಕಾರ ನಿಷೇಧಿಸಿರುವ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಪಟ್ಟಿಯಲ್ಲಿ ಪ್ಲಾಸ್ಟಿಕ್ ಹೂವುಗಳನ್ನು ಏಕೆ ಸೇರಿಸಲಾಗಿಲ್ಲ ಎಂದು ಬಾಂಬೆ ಹೈಕೋರ್ಟ್ ಬುಧವಾರ ಪ್ರಶ್ನಿಸಿದೆ. ಪ್ಲಾಸ್ಟಿಕ್ ಹೂವುಗಳನ್ನು ಮರುಬಳಕೆ ಮಾಡಬಹುದು ಅಥವಾ ಅವು ಜೈವಿಕ ವಿಘಟನೀಯ ವಸ್ತುಗಳೆಂದು ಕೇಂದ್ರ ಭಾವಿಸಿದೆಯೇ ಎಂದು ಮುಖ್ಯ ನ್ಯಾಯಮೂರ್ತಿ ಅಲೋಕ್ ಅರಾಧೆ ಮತ್ತು ನ್ಯಾಯಮೂರ್ತಿ ಭಾರತಿ ಡಾಂಗ್ರೆ ಅವರ ವಿಭಾಗೀಯ ಪೀಠ ಕೇಳಿದೆ. ಮರುಬಳಕೆ ಮಾಡಲಾಗದ ಪ್ಲಾಸ್ಟಿಕ್‌ಗಳನ್ನು ನಿಷೇಧಿಸಲಾಗಿದೆ ಎಂದು ಕೇಂದ್ರ ಸರ್ಕಾರ ಹೊರಡಿಸಿದ ಅಧಿಸೂಚನೆಯನ್ನು ನ್ಯಾಯಪೀಠ ಉಲ್ಲೇಖಿಸಿತು.



# ರಾಹುಲ್ ಗಾಂಧಿಗೆ ಸಮನ್ಸ್ ನೀಡಿದ ಯುಪಿ ಕೋರ್ಟ್

ಉತ್ತರಪ್ರದೇಶ: 2022ರ ಡಿಸೆಂಬರ್‌ನಲ್ಲಿ ಭಾರತ್ ಜೋಡೋ ಯಾತ್ರೆಯ ಸಂದರ್ಭದಲ್ಲಿ ಸೇನೆಯ ವಿರುದ್ಧ ಮಾನಹಾನಿಕರ ಹೇಳಿಕೆ ನೀಡಿದ ಆರೋಪದ ಮೇಲೆ ರಾಹುಲ್ ಗಾಂಧಿ ಅವರಿಗೆ ಇಲ್ಲಿನ ನ್ಯಾಯಾಲಯವು ಸಮನ್ಸ್ ಜಾರಿ ಮಾಡಿದೆ. ರಾಹುಲ್ ಗಾಂಧಿ



ಯವರು ಡಿ.16, 2022ರಂದು ಭಾರತ್ ಜೋಡೋಯಾತ್ರೆಯ ಸಂದರ್ಭದಲ್ಲಿ ಅವಹೇಳನಕಾರಿ ಹೇಳಿಕೆಗಳನ್ನು ನೀಡಿದ್ದಾರೆ ಎಂದು ವಕೀಲರು ದೂರಿದ್ದರು. ಭಾರತ ಮತ್ತು ಚೀನಾದ ಸೇನೆಗಳ ನಡುವಿನ ಘರ್ಷಣೆಯ ಬಗ್ಗೆ ಆಕ್ಷೇಪಾರ್ಹ ಕಾಮೆಂಟ್‌ಗಳನ್ನು ಮಾಡಿದ್ದರು.




# ಕಾನ್ಪಿಡ ಉಪಾಧ್ಯಕ್ಷನ ಹೊಸ ನಮೂನೆಯ ಶೀರ್ಷಿಕೆ ಇರುವ ಸಿನಿಮಾ ಕೆಎ–11–1977

ವಿನೂತನ, ವಿಶಿಷ್ಟ ಹಾಗೂ ವಿಸ್ಮಯಗಳಿಂದ ಕೂಡಿರುವ ವಿಭಿನ್ನ ಶೀರ್ಷಿಕೆ "ಕೆಎ–11–1977" ಚಿತ್ರದ ಮುಹೂರ್ತ ಸಮಾರಂಭವು ಶ್ರೀ ಮಲ್ಲೈ ಮಹದೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಅದ್ದೂರಿಯಾಗಿ ನಡೆಯಿತು. ಒಂಬತ್ತು ಬಾರಿ ರಾಷ್ಟ್ರ ಪ್ರಶಸ್ತಿ ಪಡೆದಿರುವ ಹಿರಿಯ ನಿರ್ದೇಶಕ ಪಿ.ಶೇಷಾದ್ರಿ ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡಿ ತಂಡಕ್ಕೆ ಶುಭ ಹಾರೈಸಿದರು. ನಂತರ ಮಾತಾಡಿದ ಅವರು ಜಗದೀಶ್ ಕೊಪ್ಪ ಗುರುಗಳೇ ಅಂತ ಕರೆಯುತ್ತಾರೆ. ಪರಸ್ಪರ ಯಾರು ಯಾರಿಗೂ ಗುರು ಅಲ್ಲ. ಯಾರಿಗೂ ಶಿಷ್ಯ ಅಲ್ಲ. ನಾವುಗಳು ಕಾಯಕದಲ್ಲಿ ಬ್ಯುಸಿಯಾಗಿರಬೇಕು. 'ಸಮರ' ಚಿತ್ರದಲ್ಲಿ ನನ್ನ ಜತೆಗೆ ಕೆಲಸ ಮಾಡಿದ್ದರು. ಇತ್ತೀಚಿನ ದಿನಗಳಲ್ಲಿ ಅವರು ನಟನೆ ಮಾಡುತ್ತಿದ್ದಾರೆ. ನೀವು ಯಾವಾಗಲೂ ತಂತ್ರಜ್ಞರು. ನಿರ್ದೇಶನ ಮಾಡುತ್ತಿರಬೇಕೆಂದು ಸಲಹೆ ನೀಡಿದ್ದೆ. ಅದರಂತೆ ಗ್ಯಾಪ್ ತರುವಾಯ ಹಳೇ ದಾರಿಗೆ ಮರಳಿದ್ದಾರೆ. ಒಳ್ಳೆಯದಾಗಲಿ ಎಂದರು. ಶರಣ್ ಮೊದಲ ಬಾರಿ ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದ 'ಕಾಲೇಜ್ ಕಾಲೇಜ್' ಮತ್ತು 'ಥ್ಯಾಂಕ್ಸ್' ಚಿತ್ರಗಳಿಗೆ ಆಕ್ಷನ್ ಕಟ್ ಹೇಳಿರುವ ಜಗದೀಶ್ ಕೊಪ್ಪ ದೀರ್ಘ ಕಾಲದ ಗ್ಯಾಪ್ ನಂತರ ಚಿತ್ರಕ್ಕೆ ಕಥೆ, ಚಿತ್ರಕಥೆ, ನಿರ್ದೇಶನ ಅಲ್ಲದೆ ಸಹ ನಿರ್ಮಾಪಕರಾಗಿ ಗುರುತಿಸಿಕೊಳ್ಳುತ್ತಿದ್ದಾರೆ. ಪ್ರಕಾಶ್ ಪ್ರೊಡಕ್ಷನ್ ಅಡಿಯಲ್ಲಿ ಬೆಂಗಳೂರು ಉದ್ಯಮಿ ಹೆಚ್. ಪ್ರಕಾಶ್ ಬಂಡವಾಳ ಹೂಡುತ್ತಿರುವುದು ಹೊಸ ಅನುಭವ. ನಿರ್ದೇಶಕರು ಹೇಳುವಂತೆ ಟೈಟಲ್ ವಾಹನದ ಸಂಖ್ಯೆ ಅಥವಾ ಕೇಸ್ ನಂಬರ್ ಅಂತ ಎಲ್ಲರೂ ಕೇಳುತ್ತಿದ್ದಾರೆ. ಮಾಧ್ಯಮದವರು ಕೇಳುತ್ತಿರುವ ಪ್ರಶ್ನೆಗಳಿಗೆ ಕುತೂಹಲ ಹಾಗೆಯೇ ಇರಲಿ. ಮುಂದಿನ ದಿನಗಳಲ್ಲಿ ಎಲ್ಲವು ಗೊತ್ತಾಗಲಿದೆ. ಮಡಕೇರಿ, ಶಿವಮೊಗ್ಗ, ಸಕಲೇಶಪುರದಲ್ಲಿ ಚಿತ್ರೀಕರಣ ನಡೆಸಲಾಗುವುದು. ಮೂವರು ನಾಯಕರು ಆಯ್ಕೆಯಾಗಿದ್ದು, ನಾಯಕಿಯರ ಆಯ್ಕೆ ನಡೆಯುತ್ತಿದೆ ಎನ್ನುತ್ತಾ ಒಂದು ಎಳೆಯನ್ನು ಬಿಟ್ಟು ಕೊಡದೆ ಗೌಪ್ಯತೆ ಕಾಪಾಡಿಕೊಂಡರು. ನವೀನ್ ಕೃಷ್ಣ ಬಣ್ಣ ಹಚ್ಚುವ ಜತೆಗೆ ಸಂಭಾಷಣೆ ಕೂಡ ಬರೆಯುತ್ತಿದ್ದಾರೆ. ಮಳವಳ್ಳಿ ಸಾಯಿಕೃಷ್ಣ ಮತ್ತು ಋಷಿ ಸಾಹಿತ್ಯದ ಎರಡು ಗೀತೆಗಳಿಗೆ ಪಳನಿ. ಡಿ. ಸೇನಾಪತಿ ಸಂಗೀತ ಸಂಯೋಜಿಸಿದ್ದಾರೆ. ಛಾಯಾಗ್ರಹಣ ರೇಣುಕುಮಾರ್ ಅವರದ್ದಾಗಿದೆ. ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್, ಜಂಟಿ ಕಾರ್ಯದರ್ಶಿಗಳಾದ ಮಳವಳ್ಳಿ ಸಾಯಿಕೃಷ್ಣ, ಕಾರ್ಯಕಾರಿ ಸಮಿತಿ ಸದಸ್ಯರಾದಎಸ್ ಆರ್ ಪ್ರಮೋದ್ ಅವರು ಆಗಮಿಸಿ ನಿರ್ದೇಶಕರಾಗಿರುವ ಸಂಘದ ಉಪಾಧ್ಯಕ್ಷ ಜಗದೀಶ್ ಕೊಪ್ಪ ಅವರನ್ನು ಗೌರವಿಸಿದರು.



# 'ಭುವನಂ ಗಗನಂ' ಫೆಬ್ರವರಿ 14ಕ್ಕೆ ಬಿಡುಗಡೆ..




ಕನ್ನಡ ಚಿತ್ರರಂಗದ ಪ್ರತಿಭಾನ್ವಿತ ನಟರಾದ ಪ್ರಮೋದ್ ಹಾಗೂ ಪೃಥ್ವಿ ಅಂಬರ್ ನಟನೆಯ ಭುವನಂ ಗಗನಂ ಸಿನಿಮಾ ಫೆಬ್ರವರಿ 14ಕ್ಕೆ ತೆರೆಗೆ ಬರ್ತಿದೆ. ಚಿತ್ರದ ಪ್ರಚಾರ ಕಾರ್ಯ ಭರದಿಂದ ಸಾಗುತ್ತಿದ್ದು, ಭುವನಂ ಗಗನಂ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು. ಈ ವೇಳೆ ನಟರಾದ ಡಾರ್ಲಿಂಗ್ ಕೃಷ್ಣ, ನೀನಾಸಂ ಸತೀಶ್, ಬಿಗ್ ಬಾಸ್ ಖ್ಯಾತಿಯ ಮಂಜು ಪಾವಗಡ, ತ್ರಿವಿಕ್ರಮ್,ಅನುಷಾ ರೈ, ಹಾಸ್ಯ ಕಲಾವಿದ ಶಿವರಾಜ್ ಕೆ ಆರ್ ಪೇಟೆ, ಡೈರೆಕ್ಟರ್ ಚೇತನ್ ಕುಮಾರ್, ನಟಿಯರಾದ ಪವನಾ ಗೌಡ, ಸಾನ್ಯಾ ಐಯ್ಯರ್, ಸಂಭಾಷಣೆಗಾರ ಮಾಸ್ತಿ ಸೇರಿದಂತೆ ಮತ್ತಿತರರು ಭುವನಂ ಗಗನಂಗೆ ಸಾಥ್ ಕೊಟ್ಟರು. ಎರಡು ಮುಗ್ಧ ಮನಸ್ಸುಗಳ ಪಯಣದ ಭುವನಂ ಗಗನಂ ಟ್ರೇಲರ್ ಪ್ರಾಮಿಸಿಂಗ್ ಆಗಿದೆ. ಗಿರೀಶ್ ಮೂಲಿಮನಿ ಒಂದೊಳ್ಳೆ ಕಥೆಯನ್ನು ಆಯ್ಕೆ ಮಾಡ್ಕೊಂಡು ಪ್ರೇಕ್ಷಕರ ಮುಂದೆ ಬಂದಿದ್ದಾರೆ. ಈ ಚಿತ್ರಕ್ಕೆ ಅವರೇ ಕಥೆ, ಚಿತ್ರಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ.

# ಪುಣೆ ಚಿತ್ರೋತ್ಸವದಲ್ಲಿ ಕನ್ನಡದ ಏಕೈಕ ಸಿನಿಮಾ 'ಲಚ್ಚಿ'

ಪುಣೆಯಲ್ಲಿ ಫೆಬ್ರವರಿ 13 ರಿಂದ 20ರವರೆಗೆ ಚಿತ್ರೋತ್ಸವ ನಡೆಯಲಿದ್ದು, 11 ಸ್ಕ್ರೀನ್‌ಗಳಲ್ಲಿ 200ಕ್ಕೂ ಹೆಚ್ಚು ಚಲನಚಿತ್ರಗಳು ಪ್ರದರ್ಶನಗೊಳ್ಳಲಿವೆ. ಈ ಚಿತ್ರೋತ್ಸವದ ಭಾರತೀಯ ಸಿನಿಮಾ ವಿಭಾಗದಲ್ಲಿ "ಲಚ್ಚಿ" ಚಿತ್ರವು ಪ್ರದರ್ಶನಗೊಳ್ಳುತ್ತಿದ್ದು, ಇದನ್ನು ಕನ್ನಡ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷರಾದ ಕೃಷ್ಣೇಗೌಡರು ನಿರ್ದೇಶಿಸಿದ್ದಾರೆ. ಫೆಬ್ರವರಿ 14ರಂದು ಚಿತ್ರೋತ್ಸವದ ಎರಡನೇ ದಿನ ಪಿವಿಆರ್‌ನ ಆರನೇ ಸ್ಕ್ರೀನ್‌ನಲ್ಲಿ ಸಂಜೆ 5.45 ಗಂಟೆಯಿಂದ ಪ್ರದರ್ಶನಗೊಳ್ಳಲಿದೆ. ಮತ್ತೆ 16ರಂದು ಮರು ಪ್ರದರ್ಶನಗೊಳ್ಳಲಿದೆ. ಇದು ಕನ್ನಡಿಗರಿಗೆ ಹೆಮ್ಮೆಯ ವಿಷಯವಾಗಿದೆ. ಈಗಾಗಲೇ ಹಲವು ಚಿತ್ರೋತ್ಸವಗಳಲ್ಲಿ ಪ್ರದರ್ಶನ ಕಂಡಿರುವ ಈ ಚಿತ್ರವು ಕೋಲ್ಕತ್ತಾ ಚಿತ್ರೋತ್ಸವದ ಭಾರತೀಯ ಭಾಷಾ ವಿಭಾಗದಲ್ಲಿ ಅತ್ಯುತ್ತಮ ಚಿತ್ರ ಪ್ರಶಸಿಯನ್ನೂ ಗಳಿಸಿತ್ತು. ಈ ಚಿತ್ರ ಬಿ. ಟಿ. ಲಲಿತಾ ನಾಯಕ್‌ರ ಕಥೆಯನ್ನು ಆಧರಿಸಿ ರೂಪಿಸಲಾಗಿದೆ.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212